ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-1**

---

ಸಂಖ್ಯೆ: ಎಡಿಎಂ2(1) ಶಿಕ್ಷಕರ ರಾಜ್ಯ ಪ್ರಶಸ್ತಿ/01/2023-24. ದಿನಾಂಕ:31-07-2023.

**-:ಸುತ್ತೋಲೆ:-**

ವಿಷಯ:-2023-24 ನೇ ಸಾಲಿನ **" ರಾಜ್ಯ ಮಟ್ಟದ ಉತ್ತಮ ಶಿಕ್ಷಕ "** ಪ್ರಶಸ್ತಿಗೆ ಆನ್-ಲೈನ್ ಮೂಲಕ ಅರ್ಜಿ ಸಲ್ಲಿಸುವ ಅವಧಿಯನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ:-ಈ ಕಛೇರಿಯ ಇದೇ ಸಮ ಸಂಖ್ಯೆಯ ಸುತ್ತೋಲೆ ದಿನಾಂಕ: 15.07.2023.

***********

2023-24 ನೇ ಸಾಲಿನ " ರಾಜ್ಯ ಮಟ್ಟದ ಉತ್ತಮ ಶಿಕ್ಷಕ " ಪ್ರಶಸ್ತಿಗೆ ಅರ್ಹ ಶಿಕ್ಷಕರು / ಸಹ ಶಿಕ್ಷಕರು / ವಿಶೇಷ ಶಿಕ್ಷಕರು / ಮುಖ್ಯ ಶಿಕ್ಷಕರು ಶಾಲಾ ಶಿಕ್ಷಣ ಇಲಾಖೆಯ ಅಂತರ್ಜಾಲ ತಾಣ **http://www.schooleducation. kar.nic.in** ದಲ್ಲಿನ **" ರಾಜ್ಯ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ "** ಕೊಂಡಿಯ (ಲಿಂಕ್) ಮೂಲಕ ತಾವೇ ಸ್ವತಃ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಲು ದಿನಾಂಕ: 15-07-2023 ರಿಂದ 31-07-2023 ರವರೆಗೆ ಅವಕಾಶ ಕಲ್ಪಿಸಿರುವ ಬಗ್ಗೆ ಹಾಗೂ ಸದರಿ ಅರ್ಜಿ ಸಲ್ಲಿಸಲು ಅನುಸರಿಸಬೇಕಾದ ಕಾರ್ಯ ವಿಧಾನದ ಕುರಿತಾದ ವಿವರಗಳನ್ನು ಉಲ್ಲೇಖಿತ ಸುತ್ತೋಲೆಯಲ್ಲಿ ವಿಸ್ತೃತವಾಗಿ ತಿಳಿಸಲಾಗಿದೆ.

**ಈ ಪ್ರಶಸ್ತಿಗೆ ಹೆಚ್ಚಿನ ಸಂಖ್ಯೆಯಲ್ಲಿ ಅರ್ಹರು ಅರ್ಜಿ ಸಲ್ಲಿಸುವುದನ್ನು ಪ್ರೋತ್ಸಾಹಿಸುವ ಸದುದ್ದೇಶದಿಂದ ಅರ್ಜಿ ಸಲ್ಲಿಸುವ ಅವಧಿಯನ್ನು ದಿನಾಂಕ: 05-08-2023 ರ ವರೆಗೆ ವಿಸ್ತರಿಸಲಾಗಿದೆ.**

**ಅದರಂತೆ, ರಾಜ್ಯದ ಎಲ್ಲಾ ಶಾಲೆಗಳ ಮುಖ್ಯಸ್ಥರು, ಪ್ರಾಂಶುಪಾಲರು, ಶಿಕ್ಷಕರ ತರಬೇತಿ ಕೇಂದ್ರ(ಟಿ.ಟಿ.ಐ), ಕ್ಷೇತ್ರ ಶಿಕ್ಷಣಾಧಿಕಾರಿಗಳು, ಉಪನಿರ್ದೇಶಕರು, ಆಡಳಿತ/ಅಭಿವೃದ್ಧಿ ಮತ್ತು ಪ್ರಾಂಶುಪಾಲರು, ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯ(ಸಿ.ಟಿ.ಇ) ಇವರುಗಳು 2023-24 ನೇ ಸಾಲಿನ " ರಾಜ್ಯ ಮಟ್ಟದ ಉತ್ತಮ ಶಿಕ್ಷಕ " ಪ್ರಶಸ್ತಿಗೆ ಅರ್ಹರು ಆನ್-ಲೈನ್ ಮೂಲಕ ಅರ್ಜಿ ಸಲ್ಲಿಸಲು ದಿನಾಂಕ: 05-08-2023 ರವರೆಗೆ ಕಾಲಾವಕಾಶವನ್ನು ವಿಸ್ತರಿಸಲಾಗಿರುವ ಬಗ್ಗೆ ತಮ್ಮ-ತಮ್ಮ ವ್ಯಾಪ್ತಿಯಲ್ಲಿನ ಶಿಕ್ಷಕರಿಗೆ / ಸಹ ಶಿಕ್ಷಕರಿಗೆ / ವಿಶೇಷ ಶಿಕ್ಷಕರಿಗೆ / ಮುಖ್ಯ ಶಿಕ್ಷಕರಿಗೆ ವ್ಯಾಪಕ ಪ್ರಚಾರದ ಮೂಲಕ ಮತ್ತು ಕಛೇರಿ ಸೂಚನಾ ಫಲಕಯಲ್ಲಿ ಅಳವಡಿಸುವುದರ ಮೂಲಕ ಗಮನಕ್ಕೆ ತರುವುದು ಮತ್ತು ಉಲ್ಲೇಖಿತ ಸುತ್ತೋಲೆಯ ಅನುಸಾರ ಸದರಿಯವರು ನಿಗದಿತ ಅವಧಿಯೊಳಗೆ ಸುಸೂತ್ರವಾಗಿ ಅರ್ಜಿ ಸಲ್ಲಿಸಲು ಸೂಕ್ತ ಮಾರ್ಗದರ್ಶನ/ತರಬೇತಿ ನೀಡಲು ನಿಯಮಾನುಸಾರ ಸೂಕ್ತ ಕ್ರಮಗಳನ್ನು ವಹಿಸಲು ತಿಳಿಸಿದೆ.**

ಆಯುಕ್ತರು
ಶಾಲಾ ಶಿಕ್ಷಣ ಇಲಾಖೆ

**ಇವರಿಗೆ:**

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ.
2. ರಾಜ್ಯದ ಎಲ್ಲಾ ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯಗಳ(ಸಿ.ಟಿ.ಇ) ಗಳ ಪ್ರಾಂಶುಪಾಲರು ಮತ್ತು ಪದನಿಮಿತ್ತ ಸಹ ನಿರ್ದೇಶಕರಿಗೆ.

3. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) & ಉಪನಿರ್ದೇಶಕರು (ಅಭಿವೃದ್ಧಿ), ಶಾಲಾ ಶಿಕ್ಷಣ ಇಲಾಖೆ ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ.
4. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
5. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಶಾಲಾ ಶಿಕ್ಷಣ ಇಲಾಖೆ ಇವರುಗಳಿಗೆ (ಆಯಾ ಉಪನಿರ್ದೇಶಕರು (ಆಡಳಿತ)ರವರ ಮೂಲಕ) ಅಗತ್ಯ ಕ್ರಮಕ್ಕಾಗಿ.
6. ರಾಜ್ಯದ ಎಲ್ಲಾ ಶಿಕ್ಷಕರ ತರಬೇತಿ ಕೇಂದ್ರಗಳ ಪ್ರಾಂಶುಪಾಲರಿಗೆ.
7. ಈ ಕಛೇರಿಯ ಹಿರಿಯ ಸಹಾಯಕ ನಿರ್ದೇಶಕರು/ಸಹಾಯಕ ನಿರ್ದೇಶಕರು (ಇ-ಆಡಳಿತ ಘಟಕ), ಇವರಿಗೆ ಕಳುಹಿಸುತ್ತಾ, ಈ ಸುತ್ತೋಲೆಯನ್ನು ಇಲಾಖಾ ಅಂತರ್ಜಾಲ ತಾಣದ ಮುಖ ಪುಟದಲ್ಲಿ ಕಾಣುವಂತೆ ಅಳವಡಿಸಲು ಮತ್ತು ಸಂಪೂರ್ಣ ಪ್ರಕ್ರಿಯೆಯನ್ನು ಆನ್-ಲೈನ್ ಮೂಲಕ ಯಶಸ್ವಿಯಾಗಿ ಪೂರ್ಣಗೊಳಿಸಲು ಅಗತ್ಯ ಕ್ರಮವಹಿಸಲು ಸೂಚಿಸಿದೆ.
**8.** ಹಿರಿಯ ಸಹಾಯಕ ನಿರ್ದೇಶಕರು (ಸಾರ್ವಜನಿಕ ಸಂಪರ್ಕ ಮತ್ತು ಶಿಕ್ಷಣ ವಾರ್ತೆ) ಇವರಿಗೆ ಕಳುಹಿಸುತ್ತಾ, ಶಿಕ್ಷಣ ವಾರ್ತೆಯ ಜುಲೈ ಸಂಚಿಕೆಯಲ್ಲಿ ಪ್ರಕಟಿಸಲು ಹಾಗೂ ಎಲ್ಲಾ ಮುದ್ರಣ & ವಿದ್ಯುನ್ಮಾನ ಮಾಧ್ಯಮದ ಮೂಲಕ ವ್ಯಾಪಕ ಪ್ರಚಾರ ನೀಡಲು ಸೂಕ್ತ ಕ್ರಮವಹಿಸಲು ತಿಳಿಸಿದೆ.
9. ರಾಜ್ಯದ ಎಲ್ಲಾ ಶಿಕ್ಷಕರಿಗೆ / ಸಹ ಶಿಕ್ಷಕರಿಗೆ / ವಿಶೇಷ ಶಿಕ್ಷಕರಿಗೆ / ಮುಖ್ಯ ಶಿಕ್ಷಕರಿಗೆ (ಆಯಾ ಶಾಲಾ ಮುಖ್ಯಸ್ಥರ / ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ).

**ಪ್ರತಿಯನ್ನು ಮಾಹಿತಿಗಾಗಿ,**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಗೌರವಪೂರ್ವಕವಾಗಿ ಸಲ್ಲಿಸಿದೆ.
2. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ವಂದನಾ ಪೂರ್ವಕವಾಗಿ ಕಳುಹಿಸುತ್ತಾ, ಮಾನ್ಯ ಸಚಿವರ ಆದ್ಯ ಗಮನಕ್ಕೆ ತರಲು ತಿಳಿಸಿದೆ.
3. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ-ಕರ್ನಾಟಕ, ಬೆಂಗಳೂರು.
4. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, 18 ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು.
5. ರಾಜ್ಯ / ಜಿಲ್ಲಾ / ತಾಲ್ಲೂಕು ಆಯ್ಕೆ ಸಮಿತಿಗಳ ಎಲ್ಲಾ ಸದಸ್ಯರಿಗೆ (ಆಯಾ ಸಮಿತಿಯ ಸದಸ್ಯ ಕಾರ್ಯದರ್ಶಿಗಳ ಮೂಲಕ).
6. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಧಾರವಾಡ / ಕಲಬುರಗಿ.
7. ನಿರ್ದೇಶಕರು, ಪ್ರೌಢಶಿಕ್ಷಣ / ಉರ್ದು ಮತ್ತು ಇತರ ಅಲ್ಪಸಂಖ್ಯಾತ ಭಾಷಾ ಶಾಲೆಗಳು, ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
8. ನಿರ್ದೇಶಕರು (ಡಿ.ಎಸ್.ಇ.ಆರ್.ಟಿ), 100 ಅಡಿ ರಿಂಗ್ ರಸ್ತೆ, ಬನಶಂಕರಿ 3 ನೇ ಹಂತ, ಬೆಂಗಳೂರು.
9. ಶಾಲಾ ಶಿಕ್ಷಣ ಇಲಾಖೆಯ ಉಳಿದ ಎಲ್ಲಾ ನಿರ್ದೇಶಕರಿಗೆ.
10. ಜಂಟಿ ನಿರ್ದೇಶಕರು,(ಆಡಳಿತ), ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
11. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ವಿಭಾಗೀಯ ಸಹನಿರ್ದೇಶಕರಿಗೆ.
12. ಉಪ ನಿರ್ದೇಶಕರು,ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ,ಶಿಕ್ಷಕರ ಸದನ,ಕೆ.ಜಿ ರಸೆ, ಬೆಂಗಳೂರು.
13. ಅಧ್ಯಕ್ಷರು, ಪ್ರೌಢ ಶಾಲಾ ಮುಖ್ಯ ಶಿಕ್ಷಕರ ಸಂಘ, ಬೆಂಗಳೂರು.

14. ಅಧ್ಯಕ್ಷರು, ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರ ಸಂಘ, ಬೆಂಗಳೂರು.
15. ಅಧ್ಯಕ್ಷರು, ಸರ್ಕಾರಿ ಗ್ರೇಡ್–1 ದೈಹಿಕ ಶಿಕ್ಷಕರ ಸಂಘ, ಬೆಂಗಳೂರು.
16. ಅಧ್ಯಕ್ಷರು, ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ, ಬೆಂಗಳೂರು.
17. ಅಧ್ಯಕ್ಷರು, ಸರ್ಕಾರಿ ಪ್ರಾಥಮಿಕ ಶಾಲಾ ಗ್ರೇಡ್–2 ದೈಹಿಕ ಶಿಕ್ಷಕರ ಸಂಘ, ಬೆಂಗಳೂರು.
**18. ಈ ಸುತ್ತೋಲೆಯು ಶಾಲಾ ಶಿಕ್ಷಣ ಇಲಾಖೆಯ ಅಂತರ್ಜಾಲ ತಾಣ (http://www.schooleducation.kar. nic.in) ದಲ್ಲಿ ಲಭ್ಯವಿರುತ್ತದೆ.**
19. ಕಛೇರಿ ಪ್ರತಿ.